ಶನಿವಾರ 09.08.2025 ಬೆಂಗಳೂರು ಗ್ರಾಮಾಂತರ ಬೆಲೆ: 5ರೂ, 2 ಪುಟಗಳು ಸಂಪುಟ 01 - ಸಂಚಿಕೆ 20
Digital Varthe Kannada Daily Volume 01 - Issue 20 Saturday 09.08.2025 Price: 5/- Rs 2 Pages Bangalore Rural

DIGITAL VARTHE
www.digitalvarthe.com

# ಡಿಜಿಟಲ್ ವಾರ್ತೆ

RNI: KNKAN/25/A1348 ಕನ್ನಡಿಗರ ಶಕ್ತಿ ಕನ್ನಡ ದಿನಪತ್ರಿಕೆ

ಅಭಿಷೇಕ್ ಚಿಕ್ಕಮಾರನಹಳ್ಳಿ
ಸಂಪಾದಕರು

ಪುರುಷೋತ್ತಮ್ ಬಿ.ಹೆಚ್
ವ್ಯವಸ್ಥಾಪಕರು
digitalvarthe@gmail.com

## ಸಂಸತ್ತಿನಲ್ಲಿ ಪ್ರಮಾಣವಚನ ಸ್ವೀಕರಿಸಿದ್ದೇನೆ: ರಾಹುಲ್ ಗಾಂಧಿ

# ಚುನಾವಣಾ ಆಯೋಗಕ್ಕೆ 5 ಪ್ರಶ್ನೆ ಹಾಕಿದ ರಾಗ

### ರಾಹುಲ್ ಆರೋಪದ ಬೆನ್ನಲ್ಲೇ, ಹಲವು ರಾಜ್ಯಗಳಲ್ಲಿ ವೆಬ್ಸೈಟ್ ಬಂದ್ ಮಾಡಿರುವ ಚುನಾವಣಾ ಆರೋಗ: ಆರೋಪ



ಬೆಂಗಳೂರು: ಕರ್ನಾಟಕದಲ್ಲಿ ಲೋಕಸಭೆ ಚುನಾವಣೆಯಲ್ಲಿ "ಮತಗಳ್ಳತನ" ನಡೆದಿದೆ ಎಂದು ಆರೋಪಿಸಿ, ಅದಕ್ಕೆ ಸಂಬಂಧಿಸಿದ ದಾಖಲೆಗಳನ್ನು ಬಿಡುಗಡೆ ಮಾಡಿದ್ದ ಲೋಕಸಭೆ ಪ್ರತಿಪಕ್ಷದ ನಾಯಕ ರಾಹುಲ್ ಗಾಂಧಿ ಶುಕ್ರವಾರ ತಮ್ಮ ಆರೋಪಗಳನ್ನು ಪುನರುಚ್ಚರಿಸಿದ್ದು, ಸಹಿ ಮಾಡಿದ ಅಫಿಡವಿಟ್ ಜೊತೆಗೆ ದಾಖಲೆ ಸಲ್ಲಿಸುವಂತೆ ಕೇಳಿದ್ದಕ್ಕಾಗಿ ಚುನಾವಣಾ ಆಯೋಗವನ್ನು ತರಾಟೆಗೆ ತೆಗೆದುಕೊಂಡಿದ್ದಾರೆ.

'ಮತ ಅಧಿಕಾರ ರ್‍ಯಾಲಿ'ಯನ್ನುದ್ದೇಶಿಸಿ ಮಾತನಾಡಿದ ಅವರು, ಚುನಾವಣಾ ಆಯೋಗ ಮತ್ತು ಬಿಜೆಪಿ ಲೋಕಸಭಾ ಚುನಾವಣೆಯನ್ನು ಗೆಲ್ಲಲು ಒಪ್ಪಂದ ಮಾಡಿಕೊಂಡಿವೆ. ಚುನಾವಣಾ ಆಯೋಗವು ನನಗೆ ಅಫಿಡವಿಟ್ ಸಲ್ಲಿಸಲು ಮತ್ತು ಪ್ರಮಾಣ ವಚನದ ಮೂಲಕ ದಾಖಲೆಗಳನ್ನು ಸಲ್ಲಿಸುವಂತೆ ಕೇಳಿದೆ. ನಾನು ಸಂವಿಧಾನವನ್ನು ಹಿಡಿದುಕೊಂಡು ಸಂಸತ್ತಿನೊಳಗೆ ಈಗಾಗಲೇ ಪ್ರಮಾಣವಚನ ಸ್ವೀಕರಿಸಿದ್ದೇನೆ' ಎಂದು ಹೇಳಿದರು.

ತಾವು ಬಿಡುಗಡೆ ಮಾಡಿದ ದತ್ತಾಂಶದ ಆಧಾರದ ಮೇಲೆ ಜನರು ಚುನಾವಣಾ ಆಯೋಗವನ್ನು ಪ್ರಶ್ನಿಸುತ್ತಿದ್ದರೆ, ಇತ್ತ ಚುನಾವಣಾ ಆಯೋಗವು ತನ್ನ ವೆಬ್‌ಸೈಟ್ ಅನ್ನು ಮುಚ್ಚಿದೆ. ದತ್ತಾಂಶವನ್ನು ಆಧರಿಸಿ ಜನರು ಪ್ರಶ್ನಿಸಲು ಪ್ರಾರಂಭಿಸಿದರೆ, ತಮ್ಮ ಸಂಪೂರ್ಣ ರಚನೆ ಕುಸಿಯುತ್ತದೆ ಎಂದು ತಿಳಿದಿದ್ದರಿಂದ ಮಧ್ಯಪ್ರದೇಶ, ರಾಜಸ್ಥಾನ ಮತ್ತು ಬಿಹಾರದಲ್ಲಿ ಚುನಾವಣಾ ಆಯೋಗದ ವೆಬ್‌ಸೈಟ್‌ಗಳನ್ನು ಬಂದ್ ಮಾಡಲಾಗಿದೆ ಎಂದು ಆರೋಪಿಸಿದರು.

'2024ರ ಲೋಕಸಭಾ ಚುನಾವಣೆಯಲ್ಲಿ ನಮ್ಮ ಮೈತ್ರಿಕೂಟ ಗೆಲ್ಲುತ್ತದೆ. ಆದರೆ, ಅದಾದ 4 ತಿಂಗಳ ನಂತರ ಮಹಾರಾಷ್ಟ್ರ ವಿಧಾನಸಭಾ ಚುನಾವಣೆಯಲ್ಲಿ ಬಿಜೆಪಿ ಗೆದ್ದಿದೆ. ಇದು ಅಚ್ಚರಿಯ ಚುನಾವಣಾ ಫಲಿತಾಂಶವಾಗಿತ್ತು. ನಾವು ಕಂಡುಹಿಡಿಯಲು ಪ್ರಯತ್ನಿಸಿದಾಗ, 1 ಕೋಟಿ ಹೊಸ ಮತದಾರರು ಮತ ಚಲಾಯಿಸಿರುವುದು ತಿಳಿಯಿತು; ಲೋಕಸಭಾ ಚುನಾವಣೆಯಲ್ಲಿ ಎಂದಿಗೂ ಮತ ಚಲಾಯಿಸದ 1 ಕೋಟಿ ಹೊಸ ಮತದಾರರು ಮಹಾರಾಷ್ಟ್ರ ವಿಧಾನಸಭಾ ಚುನಾವಣೆಯಲ್ಲಿ ಮತ ಚಲಾಯಿಸಿದ್ದಾರೆ' ಎಂದು ರಾಹುಲ್ ಗಾಂಧಿ ಹೇಳಿದರು.

'ಅಂತಹ ಹೊಸ ಮತಗಳು ಬಿಜೆಪಿಗೆ ಹೋಗಿವೆ. ಇದು ಮತಗಳ್ಳತನವನ್ನು ಸೂಚಿಸುತ್ತದೆ. ಈ ಹೊಸ ಮತದಾರರು ಎಲ್ಲೆಲ್ಲಿ ಮತ ಚಲಾಯಿಸಿದರೋ ಅಲ್ಲೆಲ್ಲ ಬಿಜೆಪಿ ಗೆದ್ದಿದೆ. ನಮ್ಮ ಮೈತ್ರಿಕೂಟದ ಮತಗಳು ಕಡಿಮೆಯಾಗಲಿಲ್ಲ ಮತ್ತು ಲೋಕಸಭಾ ಚುನಾವಣೆಯಲ್ಲಿ ನಾವು ಹೊಂದಿದ್ದಷ್ಟೇ ಸಂಖ್ಯೆಯ ಮತಗಳನ್ನು ನಾವು ಪಡೆದುಕೊಂಡಿದ್ದೇವೆ. ಹೊಸ ಮತದಾರರು ವಿಧಾನಸಭಾ ಚುನಾವಣೆಯಲ್ಲಿ ಬಿಜೆಪಿಗೆ ಮತ ಚಲಾಯಿಸಿದ್ದಾರೆ' ಎಂದು ಅವರು ಹೇಳಿದರು.

'ಕಾಂಗ್ರೆಸ್ ಸಮೀಕ್ಷೆಗಳ ಪ್ರಕಾರ, ಕರ್ನಾಟಕದಲ್ಲಿ ಲೋಕಸಭಾ ಚುನಾವಣೆಯಲ್ಲಿ 15 ರಿಂದ 16 ಸ್ಥಾನಗಳನ್ನು ಗೆಲ್ಲುತ್ತವೆ ಎಂದು ತೋರಿಸಿವೆ. ಆದರೆ, ಒಂಬತ್ತು ಸ್ಥಾನಗಳನ್ನು ಗೆದ್ದಿದ್ದೇವೆ. ನಂತರ ನಾವು ಅದನ್ನು ಪ್ರಶ್ನಿಸಲು ಪ್ರಾರಂಭಿಸಿದೆವು. ನಾವು ನಿಜವಾಗಿಯೂ ಚುನಾವಣೆಯಲ್ಲಿ ಸೋತಿದ್ದೇವೆಯೇ? ನಾವು ಚುನಾವಣಾ ಆಯೋಗಕ್ಕೆ ಮತದಾರರ ಪಟ್ಟಿಯ ಸಾಫ್ಟ್ ಕಾಪಿ ನೀಡುವಂತೆ ಒತ್ತಾಯಿಸಿದೆವು. ಆದರೆ, ಅವರು ಅದನ್ನು ತಿರಸ್ಕರಿಸಿದರು. ನಾವು ವಿಡಿಯೋ ನೀಡುವಂತೆ ಒತ್ತಾಯಿಸಿದಾಗ, ಅದನ್ನೂ ಅವರು ತಿರಸ್ಕರಿಸಿದರು ಮತ್ತು ಕಾನೂನನ್ನು ಬದಲಾಯಿಸಿದರು. 45 ದಿನಗಳ ನಂತರ ವಿಡಿಯೋವನ್ನು ನಾಶಪಡಿಸಬೇಕೆಂದು ಅವರು ಹೇಳಿದರು' ಎಂದು ಗಾಂಧಿ ಹೇಳಿದರು.

ಸಂವಿಧಾನದ ಪ್ರತಿಯನ್ನು ಎತ್ತಿ ತೋರಿಸಿದ ಅವರು, 'ಇದು ಸಾವಿರಾರು ವರ್ಷಗಳ ಇತಿಹಾಸದ ಸಿದ್ಧಾಂತವನ್ನು ಹೊಂದಿದೆ' ಎಂದು ಹೇಳಿದರು.ಇದರಲ್ಲಿ ಮಹಾತ್ಮ ಗಾಂಧಿ, ಅಂಬೇಡ್ಕರ್, ನೆಹರು ಮತ್ತು ಸರ್ದಾರ್ ವಲ್ಲಭಬಾಯ್ ಪಟೇಲ್ ಅವರ ಧ್ವನಿಯು ಬಸವಣ್ಣ, ನಾರಾಯಣ ಗುರು ಮತ್ತು ಜ್ಯೋತಿಬಾ ಫುಲೆ ಅವರ ಮಾತುಗಳೊಂದಿಗೆ ಪ್ರತಿಧ್ವನಿಸುತ್ತದೆ. ಇದರ ಪ್ರಕಾರ ಒಬ್ಬ ವ್ಯಕ್ತಿಗೆ ಒಂದು ಮತ. ಪ್ರತಿಯೊಬ್ಬ ಭಾರತೀಯ ನಾಗರಿಕನಿಗೂ ಒಂದು ಮತ ಚಲಾಯಿಸುವ ಹಕ್ಕಿದೆ. ಕಳೆದ ಚುನಾವಣೆಯಲ್ಲಿ ಮೋದಿ ಮತ್ತು ಅದರ ನಾಯಕರು ಸಂವಿಧಾನದ ಮೇಲೆ ದಾಳಿ ಮಾಡಿದರು. ಭಾರತೀಯ ಸಂಸ್ಥೆಗಳು ನಾಶವಾದವು' ಎಂದು ಅವರು ಆರೋಪಿಸಿದರು.

### ಚು. ಆಯೋಗಕ್ಕೆ ರಾಹುಲ್ 5 ಪ್ರಶ್ನೆ

1. ವಿರೋಧ ಪಕ್ಷಗಳಿಗೆ ಡಿಜಿಟಲ್ ಮತದಾರರ ಪಟ್ಟಿಯನ್ನು ಏಕೆ ಕೊಡುತ್ತಿಲ್ಲ? ನೀವು ಏನು ಮರೆಮಾಡುತ್ತಿದ್ದೀರಿ?
2. ಸಿಸಿಟಿವಿ ಮತ್ತು ವೀಡಿಯೊ ಪುರಾವೆಗಳನ್ನು ನಾಶಪಡಿಸಲಾಗುತ್ತಿದೆ - ಏಕೆ? ಯಾರ ಆದೇಶದ ಮೇರೆಗೆ?
3. ನಕಲಿ ಮತದಾನ ಮತ್ತು ಮತದಾರರ ಪಟ್ಟಿಯನ್ನು ಕುಶಲತೆಯಿಂದ ಬಳಸುತ್ತೀರಾ - ಏಕೆ?
4. ವಿರೋಧ ಪಕ್ಷದ ನಾಯಕರನ್ನು ಹೆದರಿಸುವುದು ಮತ್ತು ಬೆದರಿಸುವುದು - ಏಕೆ?
5. ಸ್ಪಷ್ಟವಾಗಿ ಹೇಳಿ - ಇಸಿಐ ಈಗ ಬಿಜೆಪಿಯ ಏಜೆಂಟ್ ಆಗಿ ಮಾರ್ಪಟ್ಟಿದೆಯೇ?

# ಕೂಡಲೇ ಪ್ರಧಾನಿ ಮೋದಿ ರಾಜೀನಾಮೆ ನೀಡಬೇಕು: ಸಿಎಂ ಆಗ್ರಹ

### ನರೇಂದ್ರ ಮೋದಿಗೆ ಪ್ರಧಾನಿ ಕುರ್ಚಿಯಲ್ಲಿ ಕೂರುವ ನೈತಿಕ ಹಕ್ಕಿಲ್ಲ. ಈ ಕೂಡಲೇ ರಾಜೀನಾಮೆ ನೀಡಬೇಕು

ಬೆಂಗಳೂರು: ಲೋಕಸಭಾ ಚುನಾವಣೆಯಲ್ಲಿ ಕರ್ನಾಟಕ ಮಾತ್ರವಲ್ಲದೆ ಇಡೀ ದೇಶದಲ್ಲಿ ಮತಗಳ್ಳತನವಾಗಿದೆ. ಹೀಗಾಗಿ ಮೋದಿ ಪ್ರಧಾನಿ ಸ್ಥಾನದಲ್ಲಿ ಮುಂದುವರೆಯಲು ಯಾವುದೇ ನೈತಿಕತೆ ಇಲ್ಲ. ಅವರು ಕೂಡಲೇ ರಾಜೀನಾಮೆ ಕೊಡಬೇಕು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಶುಕ್ರವಾರ ಆಗ್ರಹಿಸಿದ್ದಾರೆ.



ಮತಗಳ್ಳತನದ ವಿರುದ್ಧ ಇಂದು ನಗರದ ಫ್ರೀಡಂಪಾರ್ಕ್‌ನಲ್ಲಿ ನಡೆದ ಕಾಂಗ್ರೆಸ್ ಬೃಹತ್ ಪ್ರತಿಭಟನೆಯಲ್ಲಿ ಮಾತನಾಡಿದ ಸಿಎಂ ಸಿದ್ದರಾಮಯ್ಯ, ನರೇಂದ್ರ ಮೋದಿಗೆ ಪ್ರಧಾನಿ ಕುರ್ಚಿಯಲ್ಲಿ ಕೂರುವ ನೈತಿಕ ಹಕ್ಕಿಲ್ಲ. ಈ ಕೂಡಲೇ ರಾಜೀನಾಮೆ ನೀಡಬೇಕು ಎಂದರು. ಚುನಾವಣಾ ಆಯೋಗ ಬಿಜೆಪಿಯ ಶಾಖಾ ಕಚೇರಿ ಆಗಿದೆ. ಮತಗಳ್ಳತನದ ವಿರುದ್ಧ ಕರ್ನಾಟಕ ರಾಜ್ಯದಿಂದ ಆರಂಭವಾಗಿರುವ ಪ್ರತಿಭಟನಾ ಅಭಿಯಾನ ಇಡೀ ದೇಶಾದ್ಯಂತ ವ್ಯಾಪಿಸಲಿದೆ.ರಾಹುಲ್ ಗಾಂಧಿಯವರು ಸಂಪೂರ್ಣವಾಗಿ ಅಧ್ಯಯನ ಮಾಡಿ, ಮತದಾನದ ಅಂಕಿ ಅಂಶಗಳನ್ನು ಸಂಗ್ರಹಿಸಿ ವಿಶ್ಲೇಷಣೆ ಮಾಡಿ ದಾಖಲೆಗಳ ಸಮೇತ ದೇಶದ ಜನರ ಮುಂದೆ ಇಟ್ಟಿದ್ದಾರೆ.

ಚುನಾವಣಾ ಆಯೋಗ ಸಂವಿಧಾನದ ಅಡಿಯಲ್ಲಿ ನ್ಯಾಯಬದ್ಧವಾಗಿ ನಡೆದುಕೊಳ್ಳಬೇಕು. ಸಂವಿಧಾನ ಕೊಟ್ಟಿರುವ ಮತದಾನದ ಮೂಲಭೂತ ಹಕ್ಕನ್ನು ಯಾರೂ ಕಿತ್ತುಕೊಳ್ಳಲು ಸಾಧ್ಯವಿಲ್ಲ. ಅದಕ್ಕೆ ದೇಶದ ಜನತೆ ಅವಕಾಶ ಕೊಡುವುದಿಲ್ಲ ಎಂದರು. ಮನುವಾದಿಗಳು ಸಂವಿಧಾನ ವಿರೋಧಿಗಳು. ಇವರು ಸಂವಿಧಾನದ ಪ್ರಕ್ರಿಯೆಯನ್ನೇ ತಪ್ಪುದಾರಿಗೆ ಎಳೆಯುತ್ತಿದ್ದಾರೆ. ಮಹದೇವಪುರ ವಿಧಾನಸಭಾ ಕ್ಷೇತ್ರದಲ್ಲಿ ನಡೆದಿರುವ ವಂಚನೆ ಕಾರಣದಿಂದ ಸೆಂಟ್ರಲ್ ಲೋಕಸಭಾ ಕ್ಷೇತ್ರದಲ್ಲಿ ಕಾಂಗ್ರೆಸ್ ಸೋತಿದೆಯೇ ಹೊರತು ಜನಾಭಿಪ್ರಾಯ ಕಾಂಗ್ರೆಸ್ ಪರವಾಗಿಯೇ ಇತ್ತು ಎನ್ನುವುದು ಈಗ ಗೊತ್ತಾಗಿದೆ ಎಂದರು.

ಲೋಕಸಭಾ ಚುನಾವಣೆಯಲ್ಲಿ ಕಾಂಗ್ರೆಸ್ ರಾಜ್ಯದಲ್ಲಿ 14 ಸೀಟುಗಳನ್ನು ಗೆಲ್ಲಬೇಕಿತ್ತು. ಆದರೆ ಮತಗಳ್ಳತನದ ಕಾರಣದಿಂದ ನಾವು ಸೋತಿದ್ದೇವೆ. ಇವಿಎಂ ಬಂದ ಮೇಲೆ ಇವನ್ನು ದುರುಪಯೋಗ ಮಾಡಿಕೊಳ್ಳುವ ಕೆಲಸ ಆಗುತ್ತಿರುವುದು ಈಗ ದಾಖಲೆ ಸಮೇತ ಸಿಕ್ಕಿಬಿದ್ದಿದ್ದಾರೆ. ರಾಹುಲ್ ಗಾಂಧಿಯಿಂದ ಪ್ರಜಾಪ್ರಭುತ್ವ ಮತ್ತು ಸಂವಿಧಾನ ರಕ್ಷಣೆಗೆ ಚಳವಳಿ ಆರಂಭವಾಗಿದೆ. ಇದಕ್ಕೆ ಇಡೀ ರಾಜ್ಯದ ಜನತೆ ಬೆಂಬಲಕ್ಕೆ ನಿಲ್ಲಲಿದ್ದಾರೆ ಎಂದರು. ಚುನಾವಣಾ ಆಯೋಗ ಸಂವಿಧಾನದ ಆಶಯದಂತೆ ನಡೆದುಕೊಳ್ಳಬೇಕು. ಸಂವಿಧಾನ ದೇಶದ ಪ್ರತಿಯೊಬ್ಬ ಪ್ರಜೆಗೂ ಮತದಾನದ ಹಕ್ಕು ಕೊಟ್ಟಿದ್ದು, ಮತದಾನ ನಮ್ಮ ಮೂಲಭೂತ ಹಕ್ಕು, ನಮ್ಮ ಹಕ್ಕನ್ನು ಚಲಾಯಿಸಬೇಕು ಎಂದು ಸಿಎಂ ಸಿದ್ದರಾಮಯ್ಯ ಹೇಳಿದರು.

# ನಕಲಿ ವೋಟ್ ನಿಂದಲೇ ನನ್ನ ಮೊದಲ ಸೋಲಾಯ್ತು: ಖರ್ಗೆ

### ನಾನು 2019ರ ಲೋಕಸಭೆ ಚುನಾವಣೆ ವೇಳೆ ಚುನಾವಣಾ ರಿಗ್ಗಿಂಗ್‌ಗೆ ಬಲಿಯಾಗಿದ್ದೇನೆ.

ಬೆಂಗಳೂರು: ಸೋಲಿಲ್ಲದ ಸರದಾರ ಎಂದೇ ಗುರುತಿಸಿಕೊಂಡಿದ್ದ ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರು 2019 ರ ಲೋಕಸಭಾ ಚುನಾವಣೆಯಲ್ಲಿ ತಮ್ಮ ಮೊದಲ ಸೋಲಿಗೆ ಚುನಾವಣಾ ಅಕ್ರಮವೇ ಕಾರಣ ಎಂದು ಶುಕ್ರವಾರ ಆರೋಪಿಸಿದ್ದಾರೆ



ಮತಗಳ್ಳತನದ ವಿರುದ್ಧ ಇಂದು ನಗರದ ಫ್ರೀಡಂಪಾರ್ಕ್‌ನಲ್ಲಿ ನಡೆದ ಕಾಂಗ್ರೆಸ್ ಬೃಹತ್ ಪ್ರತಿಭಟನೆಯಲ್ಲಿ ಮಾತನಾಡಿದ ಮಲ್ಲಿಕಾರ್ಜುನ ಖರ್ಗೆ ಅವರು, ತಮ್ಮ ಸುದೀರ್ಘ ರಾಜಕೀಯ ಜೀವನದಲ್ಲಿ 2019ರ ಸೋಲು ಹೊರತುಪಡಿಸಿ, ಎಂದಿಗೂ ಚುನಾವಣೆಯಲ್ಲಿ ಸೋಲು ಅನುಭವಿಸಿಲ್ಲ ಎಂದು ಹೇಳಿದರು.

ನಾನು 2019ರ ಲೋಕಸಭೆ ಚುನಾವಣೆ ವೇಳೆ ಚುನಾವಣಾ ರಿಗ್ಗಿಂಗ್‌ಗೆ ಬಲಿಯಾಗಿದ್ದೇನೆ. ನನ್ನ ಜೀವನದಲ್ಲಿ 12ಕ್ಕೂ ಹೆಚ್ಚು ಚುನಾವಣೆಗಳನ್ನು ಗೆದ್ದಿದ್ದೇನೆ. ಆದರೆ 2019 ರ ಲೋಕಸಭಾ ಚುನಾವಣೆಯಲ್ಲಿ ಮೊದಲ ಬಾರಿಗೆ ಚುನಾವಣಾ ಅಕ್ರಮದಿಂದಾಗಿ ನಾನು ಸೋತಿದ್ದೇನೆ" ಎಂದು ಕಾಂಗ್ರೆಸ್ ಮುಖ್ಯಸ್ಥರು ಆರೋಪಿಸಿದರು. 2019ರ ಸಂಸತ್ ಚುನಾವಣೆಯಲ್ಲಿ ತಾವು ಸ್ಪರ್ಧಿಸಿದ್ದ ಗುಲ್ಬರ್ಗ ಲೋಕಸಭಾ ಕ್ಷೇತ್ರ ವ್ಯಾಪ್ತಿಯ ಐದು ವಿಧಾನಸಭಾ ಕ್ಷೇತ್ರಗಳಲ್ಲಿ ಬಿಜೆಪಿ "ನಕಲಿ ಮತದಾನ"ದಲ್ಲಿ ತೊಡಗಿತ್ತು. ಪ್ರತಿಯೊಂದರಲ್ಲೂ 20,000 ಮತಗಳನ್ನು ಗಳಿಸಿದೆ ಎಂದು ಖರ್ಗೆ ಗಂಭೀರ ಆರೋಪ ಮಾಡಿದ್ದಾರೆ.

ವಿರೋಧಿಗಳನ್ನು "ಬೆದರಿಸಲು" ಮತ್ತು ಅಧಿಕಾರ ಪಡೆಯಲು ಬಿಜೆಪಿ ಜಾರಿ ನಿರ್ದೇಶನಾಲಯ, ಕೇಂದ್ರ ತನಿಖಾ ಸಂಸ್ಥೆ ಮತ್ತು ಆದಾಯ ತೆರಿಗೆ ಇಲಾಖೆಯನ್ನು ಬಳಸುತ್ತಿದೆ ಎಂದು ಖರ್ಗೆ, ಮೋದಿ ಸರ್ಕಾರದ ವಿರುದ್ಧ ವಾಗ್ದಾಳಿ ನಡೆಸಿದರು. ಕರ್ನಾಟಕದ ಉದಾಹರಣೆಯನ್ನು ಉಲ್ಲೇಖಿಸಿ,ಸ್ಪಷ್ಟಬಹುಮತವಿಲ್ಲದಿದ್ದರೂ ಸಹ, ಬಿಜೆಪಿ ಅನೇಕ ಶಾಸಕರ ಪಕ್ಷಾಂತರವನ್ನು ಪ್ರೇರೇಪಿಸುವ ಮೂಲಕ ಆಗಿನ ಆಡಳಿತಾರೂಢ ಸಮ್ಮಿಶ್ರ ಸರ್ಕಾರವನ್ನು ಉರುಳಿಸಿತು ಎಂದರು.

ಗೋವಾ, ಮಹಾರಾಷ್ಟ್ರ ಮತ್ತು ಮಣಿಪುರದಲ್ಲೂ ಇದೇ ಆಗಿದೆ. ಅವರು(ಬಿಜೆಪಿ) ಯಾವುದೇ ಚುನಾವಣೆಯಲ್ಲಿ ಗೆಲ್ಲಲಿಲ್ಲ, ಆದರೆ ಅವರು ಜನರಿಗೆ ಹಣ ನೀಡಿ ಸರ್ಕಾರವನ್ನು ಖರೀದಿಸಿದರು" ಎಂದು ಕಾಂಗ್ರೆಸ್ ಅಧ್ಯಕ್ಷ ಆರೋಪಿಸಿದರು. 2024 ರ ಲೋಕಸಭಾ ಚುನಾವಣೆಯಲ್ಲಿ "ಮೋದಿ ಮತ್ತು ಕಂಪನಿ" ಕಾನೂನುಬದ್ಧವಾಗಿ ಗೆಲುವು ಸಾಧಿಸಿಲ್ಲ. ಬಿಜೆಪಿ ಗೆಲುವು "ರಹಸ್ಯ" ಈಗ ಬಯಲಾಗಿದೆ. ಅವರು ಮತಗಳ್ಳತನದಿಂದ ಗೆಲುವು ಸಾಧಿಸಿದ್ದಾರೆ ಎಂದು ಖರ್ಗೆ ಆರೋಪಿಸಿದರು.

Printed by: R Ramesh, Published by Abhishek D R On Behalf of Abhishek D R, Printed at Maruthi Enterprises. No.1159, Near Floor Mill, D Cross, Doddaballapura Town, Bengaluru rural, Karnataka - 561203, Published at No. 3769/1, Rajarathna Nivasa, KSRTC Layout, Near Ambedkar Stadium, Rayan Nagara, Nelamangala. Editor Abhishek D R.

# ರಾಜ್ಯದ್ಯಾಂತ್ಯ ಸಂಭ್ರಮ ಸಡಗರದ ವರಮಹಾಲಕ್ಷ್ಮಿ ಹಬ್ಬ



ಕ್ಯಾತಸಂದ ಮಂಜಣ್ಣನವರ ಮನೆಯಲ್ಲಿ ವರಮಹಾಲಕ್ಷ್ಮಿ ಹಬ್ಬದ ಸಡಗರ



ಬಿ ಎನ್ ಆರ್ ಪಬ್ಲಿಕ್ ಶಾಲೆಯ ಮುಖ್ಯಸ್ಥರಾದ ಕಾವ್ಯಶ್ರೀ ನಾಗಭೂಷಣ್ ಅವರ ಮನೆ ಮಹಾಲಕ್ಷ್ಮಿ



SFS Equipment Pvt Ltd ಕಚೇರಿಯಲ್ಲಿ ವರಮಹಾಲಕ್ಷ್ಮಿ ಸಂಭ್ರಮ



ಹುಣ್ಣಿಗೆರೆಯ ರವಿಶಂಕರ್ ದಂಪತಿಗಳ ಮನೆಯಲ್ಲಿ ಹಬ್ಬದ ಸಡಗರ

## ಧರ್ಮಸ್ಥಳ ಪ್ರಕರಣ: ಮಾಧ್ಯಮ ನಿರ್ಬಂಧಕ್ಕೆ ಸುಪ್ರೀಂ ಕೋರ್ಟ್ ನಕಾರ

### ತಡೆಯಾಜ್ಞೆ ನೀಡಿದ್ರೆ ಅನಾಮಿಕ ವ್ಯಕ್ತಿಯ ಹೇಳಿಕೆಯನ್ನು ಸಹ ವರದಿ ಮಾಡಲು ಸಾಧ್ಯವಿಲ್ಲ

ನವದೆಹಲಿ: ಧರ್ಮಸ್ಥಳದಲ್ಲಿ ಕೊಲೆಯಾದ ಶವಗಳನ್ನು ಹೂಳಲಾಗಿದೆ ಎಂಬ ಪ್ರಕರಣಕ್ಕೆ ಸಂಬಂಧಿಸಿದಂತೆ ಸಾಮಾಜಿಕ ಮಾಧ್ಯಮ ನಿರ್ಬಂಧಕ್ಕೆ ಶುಕ್ರವಾರ ಸುಪ್ರೀಂ ಕೋರ್ಟ್ ನಿರಾಕರಿಸಿದ್ದು, ಮಾತ್ರವಲ್ಲದೇ ಹೊಸದಾಗಿ ಅರ್ಜಿ ನಿರ್ಧರಿಸುವಂತೆ ಕರ್ನಾಟಕದ ವಿಚಾರಣಾ ನ್ಯಾಯಾಲಯಕ್ಕೆ ನಿರ್ದೇಶನ ನೀಡಿದೆ. ಧರ್ಮಸ್ಥಳದಲ್ಲಿ ನೂರಾರು ಶವಗಳ ಹೂತಿಟ್ಟ ಪ್ರಕರಣಕ್ಕೆ ಸಂಬಂಧಿಸಿದಂತೆ ಮಾನಹಾನಿಕರ ವರದಿಗಳ ಪ್ರಕಟಣೆ ತಡೆಯುವಂತೆ ಧರ್ಮಸ್ಥಳ ದೇವಾಲಯದ ಕಾರ್ಯದರ್ಶಿ ಹರ್ಷೇಂದ್ರ ಕುಮಾರ್ ಡಿ ಸಲ್ಲಿಸಿದ್ದ ಅರ್ಜಿಯನ್ನ ಹೊಸದಾಗಿ ನಿರ್ಧರಿಸುವಂತೆ ಸುಪ್ರೀಂ ಕೋರ್ಟ್ ಶುಕ್ರವಾರ ಕರ್ನಾಟಕ ವಿಚಾರಣಾ ನ್ಯಾಯಾಲಯಕ್ಕೆ ನಿರ್ದೇಶನ ನೀಡಿದೆ.

ಇದೇ ವೇಳೆ ಈ ಪ್ರಕರಣದಲ್ಲಿ ಮಾಧ್ಯಮ ಪ್ರತಿಬಂಧಿಸುವಂತಹ ಆದೇಶ ನೀಡಬೇಕೆ ಎನ್ನುವ ಬಗ್ಗೆ ನ್ಯಾಯಮೂರ್ತಿಗಳಾದ ರಾಜೇಶ್ ಬಿಂದಾಲ್ ಮತ್ತು ಮನಮೋಹನ್ ಅವರ ಪೀಠವು ಸಂಶಯ ವ್ಯಕ್ತಪಡಿಸಿದ್ದು, ವರದಿಗೆ ನಿರ್ಬಂಧ ಹೇರಲು ನಿರಾಕರಿಸಿದೆ.

ಪ್ರಕರಣದ ವರದಿಗೆ ಸಂಬಂಧಿಸಿದಂತೆ ಬೆಂಗಳೂರು ಸಿವಿಲ್ ನ್ಯಾಯಾಲಯವು ಯೂಟ್ಯೂಬ್ ಚಾನೆಲ್ ಮೇಲೆ ವಿಧಿಸಿದ್ದ ಪ್ರತಿಬಂಧಕ ಆದೇಶವನ್ನು ಕರ್ನಾಟಕ ಹೈಕೋರ್ಟ್ ರದ್ದುಗೊಳಿಸಿತ್ತು. ಇದರ ವಿರುದ್ಧ ಧರ್ಮಸ್ಥಳ ದೇವಾಲಯ ಸಂಸ್ಥೆಗಳ ಕಾರ್ಯದರ್ಶಿ ಹರ್ಷೇಂದ್ರ ಕುಮಾರ್ ಡಿ ಅವರು ಸಲ್ಲಿಸಿದ ಅರ್ಜಿಯನ್ನು ನ್ಯಾಯಾಲಯ ವಿಚಾರಣೆ ನಡೆಸುತ್ತಿತ್ತು.

ದೇವಾಲಯ ಆಡಳಿತವನ್ನು ಪ್ರತಿನಿಧಿಸಿದ ಹಿರಿಯ ವಕೀಲ ಮುಕುಲ್ ರೋಹಟ್ಗಿ, ದಿನದಿಂದ ದಿನಕ್ಕೆ ಸುದ್ದಿ ವಾಹಿನಿಗಳು ಮತ್ತು ಸಾಮಾಜಿಕ ಮಾಧ್ಯಮಗಳು ಮಾನಹಾನಿಕರ ವರದಿಗಳನ್ನು ಪ್ರಕಟಿಸುತ್ತಿವೆ ಎಂದು ವಾದಿಸಿದರು. ಆದರೆ, ಇದಕ್ಕಾಗಿ ಮಾಧ್ಯಮಗಳು ವರದಿ ಮಾಡುವುದನ್ನು ನಿರ್ಬಂಧಿಸಬೇಕೇ ಎಂದು ಪೀಠವು ಪ್ರಶ್ನಿಸಿತು.

ಮಾನಹಾನಿಕರ ವರದಿ ಪ್ರಸಾರಕ್ಕೆ ತಡೆ ಕೋರಿ ಸಲ್ಲಿಸಿದ್ದ ಅರ್ಜಿಯನ್ನು ನ್ಯಾಯಮೂರ್ತಿಗಳಾದ ರಾಜೇಶ್ ಬಿಂದಾಲ್ ಮತ್ತು ಮನಮೋಹನ್ ಅವರಿದ್ದ ದ್ವಿ ಪೀಠವು ವಿಚಾರಣೆ ನಡೆಸಿತು. ಆದಾಗ್ಯೂ ಈ ವಿಷಯದಲ್ಲಿ ಮಾಧ್ಯಮಗಳ ನಿರ್ಬಂಧದ ಅಗತ್ಯವಿದೆಯೇ ಎಂಬುದಕ್ಕೆ ಆಕ್ಷೇಪ ವ್ಯಕ್ತಪಡಿಸಿತು.

### ಪೀಠ ಹೇಳಿದ್ದೇನು?

'ಇಂತಹ ಮಾನಹಾನಿಕರ ಪೋಸ್ಟ್‌ಗಳಿಗೆ ದೇವಾಲಯವು ಯಾವಾಗಲೂ ಪರಿಹಾರ ಪಡೆಯಬಹುದು ಎಂದು ಹೇಳಿತು. ಆದಾಗ್ಯೂ, ಮಾಧ್ಯಮದ ವಿರುದ್ಧ ನಿರ್ಬಂಧ ಹೇರಬೇಕೇ ಎಂದು ಪ್ರಶ್ನಿಸಿತು. ವಿರಳ ಮತ್ತು ಅಪರೂಪದ ಪ್ರಕರಣಗಳಲ್ಲಿ ಮಾತ್ರ ಗ್ಯಾಗ್ ಆದೇಶಗಳನ್ನ ಹೊರಡಿಸಲಾಗುತ್ತೆ. ಇಂತಹ ಆದೇಶ ವಾಕ್ ಸ್ವಾತಂತ್ರ್ಯವನ್ನ ಹತ್ತಿಕ್ಕುತ್ತವೆ. ನಾವು ತಡೆಯಾಜ್ಞೆ ನೀಡಿದ್ರೆ ಅನಾಮಿಕ ವ್ಯಕ್ತಿಯ ಹೇಳಿಕೆಯನ್ನು ಸಹ ವರದಿ ಮಾಡಲು ಸಾಧ್ಯವಿಲ್ಲ ಎಂದು ನ್ಯಾಯಮೂರ್ತಿ ಮನಮೋಹನ್ ಹೇಳಿದರು. ಈ ವಿಷಯವನ್ನು ರಾಜ್ಯದ ವಿಚಾರಣಾ ನ್ಯಾಯಾಲಯವೇ ಪರಿಗಣಿಸಬಹುದು ಎಂದು ಪೀಠ ಅಭಿಪ್ರಾಯಪಟ್ಟಿತು.

ಮಾತ್ರವಲ್ಲದೇ ಕರ್ನಾಟಕದ ವಿಚಾರಣಾ ನ್ಯಾಯಾಲಯದ ಮುಂದೆ ಅರ್ಜಿದಾರರು ಮತ್ತೆ ವಾದ ಮಂಡಿಸಲಿ. ನಾವು ಸ್ವತಂತ್ರ ದೇಶದಲ್ಲಿ ವಾಸಿಸುತ್ತಿದ್ದೇವೆ. ವಿಚಾರಣಾ ನ್ಯಾಯಾಲಯವು ಈ ವಿಷಯದ ಬಗ್ಗೆ ಸ್ವತಂತ್ರವಾಗಿ ನಿರ್ಧಾರ ತೆಗೆದುಕೊಳ್ಳಬಹುದು ಎಂದು ಪೀಠ ಹೇಳಿತು.

### ಮುಕುಲ್ ರೋಹಟ್ಗಿ 'ವಾದ'

ವಿಚಾರಣಾ ನ್ಯಾಯಾಲಯವು ಪ್ರಕರಣವನ್ನು ಸ್ವತಂತ್ರವಾಗಿ ನಿರ್ಧರಿಸಲಿ ಎಂದು ನ್ಯಾ. ಮನಮೋಹನ್ ಹೇಳಿದರು. ಮೀಮ್‌ಗಳ ವಿಚಾರವಾಗಿ ಪೀಠವು, "ಇದೆಲ್ಲವೂ ಮೀಮ್‌ಗಳಾಗಿವೆ. ಇದನ್ನು ತೆಗೆದುಹಾಕಲು ಹೇಳಬಹುದು. ನೀವು ಹೇಳಿದಂತೆ ಇದಕ್ಕೆಲ್ಲಾ ಒಂದು ಮಿತಿ ಇರಬೇಕು" ಎಂದು ಸಹಮತಿಸಿತು. ಅಂತಿಮವಾಗಿ, "ಇದೆಲ್ಲವನ್ನೂ ವಿಚಾರಣಾ ನ್ಯಾಯಾಲಯದ ಗಮನಕ್ಕೆ ತನ್ನಿ. ಅವರು ಸ್ವತಂತ್ರವಾಗಿ ತಮ್ಮ ವಿವೇಚನೆಯನ್ನು ಬಳಸಿ ನಿರ್ಧರಿಸಲಿ" ಎಂದಿತು.

ವಿಚಾರಣೆಯ ಒಂದು ಹಂತದಲ್ಲಿ ರೋಹಟ್ಗಿ ಅವರು, "ಕೇವಲ ಒಬ್ಬ ವ್ಯಕ್ತಿಯು ಹೈಕೋರ್ಟ್ ಮೆಟ್ಟಿಲೇರಿದ್ದು, ಯಾರು ನ್ಯಾಯಾಲಯವನ್ನು ಎಡತಾಕುತ್ತಾರೋ ಅವರಿಗೆ ಮಾತ್ರವೇ ಲಾಭ ದೊರೆಯಬೇಕು. ಆದರೆ, ಈ ಪ್ರಕರಣದಲ್ಲಿ ಉಳಿದ 299 ಮಂದಿಗೂ (ಮಾಧ್ಯಮ ಸಂಸ್ಥೆಗಳು) ಲಾಭ ದೊರೆತಿದ್ದು ಹೇಗೆ? ಹೀಗಾಗಿ ಪೀಠವು ಏನಾದರೊಂದು ರಕ್ಷಣೆಯನ್ನು ನೀಡಬೇಕು," ಎಂದು ಮತ್ತೆ ಮಧ್ಯಂತರ ಪರಿಹಾರಕ್ಕೆ ಮನವಿ ಮಾಡಿದರು.

### ಏನಿದು ಪ್ರಕರಣ?

ಧರ್ಮಸ್ಥಳ ಸಮಾಧಿ ಪ್ರಕರಣಕ್ಕೆ ಸಂಬಂಧಿಸಿದ ಸುಮಾರು 9,000 ಲಿಂಕ್‌ಗಳು ಮತ್ತು ವಿವಿಧ ಸಾಮಾಜಿಕ ಖಾತೆಗಳಲ್ಲಿರುವ ಸ್ಟೋರಿಗಳನ್ನು ತೆಗೆದುಹಾಕಲು 390 ಮಾಧ್ಯಮ ಸಂಸ್ಥೆಗಳಿಗೆ ನಿರ್ದೇಶನ ನೀಡಿದ ಆದೇಶದ ಕಾನೂನುಬದ್ಧತೆಯನ್ನು ಯೂಟ್ಯೂಬ್ ಚಾನೆಲ್ ಪ್ರಶ್ನಿಸಿತ್ತು.

ಯಾವುದೇ ಎಫ್‌ಐಆರ್‌ನಲ್ಲಿ ಅವರ ವಿರುದ್ಧ ಅಥವಾ ದೇವಾಲಯದ ಅಧಿಕಾರಿಗಳ ವಿರುದ್ಧ ನಿರ್ದಿಷ್ಟ ಆರೋಪಗಳು ಇಲ್ಲದಿದ್ದರೂ, ಸುಳ್ಳು ಮತ್ತು ಮಾನಹಾನಿಕರ ಆನ್‌ಲೈನ್ ವಿಷಯವನ್ನು ಹರಡಿದ್ದಾರೆ ಎಂದು ಆರೋಪಿಸಿ ಸಲ್ಲಿಸಿದ್ದ ಮಾನನಷ್ಟ ಮೊಕದ್ದಮೆಯಲ್ಲಿ ಸ್ಥಳೀಯ ನ್ಯಾಯಾಲಯವು ಈ ಆದೇಶ ಹೊರಡಿಸಿದೆ.ತೆಗೆದುಹಾಕಲು 390 ಮಾಧ್ಯಮ ಸಂಸ್ಥೆಗಳಿಗೆ ನಿರ್ದೇಶನ ನೀಡಿದ ಆದೇಶದ ಕಾನೂನುಬದ್ಧತೆಯನ್ನು ಯೂಟ್ಯೂಬ್ ಚಾನೆಲ್ ಪ್ರಶ್ನಿಸಿತ್ತು.

ಸುದ್ದಿ ಮತ್ತು ಜಾಹೀರಾತುಗಳಿಗಾಗಿ ಸಂಪರ್ಕಿಸಿ:
9538786812 / 9880655634

## ನಟಿ ರಮ್ಯಾಗೆ ಅಶ್ಲೀಲ ಸಂದೇಶ, ಬೆದರಿಕೆ: ಪ್ರಮುಖ ಆರೋಪಿ ಬಂಧನ

### ಪ್ರಕರಣದ ಮೊದಲ ಆರೋಪಿ, ಕೆಆರ್ ಪುರಂ ನಿವಾಸ ಪ್ರಮೋದ್ ಗೌಡ(20) ನನ್ನು ಪೊಲೀಸರು ಬಂಧಿಸಿದ್ದಾರೆ.

ಬೆಂಗಳೂರು: ನಟಿ ಹಾಗೂ ಮಾಜಿ ಸಂಸದೆ ರಮ್ಯಾ ಅವರಿಗೆ ಇನ್‌ಸ್ಟಾಗ್ರಾಂ ಖಾತೆಯಲ್ಲಿ ಅಶ್ಲೀಲವಾಗಿ ಕಮೆಂಟ್ ಮಾಡಿದ್ದ ಮತ್ತು ಬೆದರಿಕೆ ಹಾಕಿದ ಪ್ರಕರಣಕ್ಕೆ ಸಂಬಂಧಿಸಿದಂತೆ ಸಿಸಿಬಿ ಪೊಲೀಸರು ಪ್ರಮುಖ ಆರೋಪಿಯನ್ನು ಬಂಧಿಸಿದ್ದಾರೆ. ಪ್ರಕರಣದ ಮೊದಲ ಆರೋಪಿ, ಕೆಆರ್ ಪುರಂ ನಿವಾಸ ಪ್ರಮೋದ್ ಗೌಡ(20)ನನ್ನು ಪೊಲೀಸರು ಬಂಧಿಸಿದ್ದಾರೆ.

ಪ್ರಮೋದ್ ಗೌಡ, ತನ್ನ ಫ್ರೆಂಡ್ ಮೊಬೈಲ್ ನಲ್ಲಿ ಅಕೌಂಟ್ ಓಪನ್ ಮಾಡಿ, ನಟಿ ರಮ್ಯಾ ಅವರ ಇನ್‌ಸ್ಟಾಗ್ರಾಂ ಖಾತೆಗೆ ಅಶ್ಲೀಲ ಮತ್ತು ಬೆದರಿಕೆ ಸಂದೇಶ ಕಳುಹಿಸಿದ್ದ ಎನ್ನಲಾಗಿದೆ. ಪ್ರಮೋದ್ ಗೌಡ- 87 ಎಂಬ ಅಕೌಂಟ್ ನಿಂದ ಮೆಸೇಜ್ ಮಾಡಿದ್ದ ಪ್ರಮೋದ್ ಗೌಡನನ್ನು ಗುರುವಾರ ರಾತ್ರಿ ಬಂಧಿಸಲಾಗಿದ್ದು, ವಿಚಾರಣೆ ನಡೆಸಲಾಗುತ್ತಿದೆ ಎಂದು ಸಿಸಿಬಿ ಪೊಲೀಸರು ತಿಳಿಸಿದ್ದಾರೆ.

ನಟ ದರ್ಶನ್ ಅವರ ಅಭಿಮಾನಿಗಳು ಎಂದು ಹೇಳಿಕೊಂಡು ಸಾಮಾಜಿಕ ಜಾಲತಾಣಗಳಲ್ಲಿ ಅಶ್ಲೀಲ ಹಾಗೂ ಅವಹೇಳನಕಾರಿ ಸಂದೇಶ ಕಳುಹಿಸಿ, ಕೊಲೆ ಬೆದರಿಕೆ ಹಾಕಿದ್ದಾರೆ ಎಂದು ಆರೋಪಿಸಿ ನಟಿ ರಮ್ಯಾ ಅವರು ಜುಲೈ 28ರಂದು ನಗರ ಪೊಲೀಸ್ ಆಯುಕ್ತ ಸೀಮಂತ್ ಕುಮಾರ್ ಸಿಂಗ್ ಅವರಿಗೆ ದೂರು ನೀಡಿದ್ದರು. ಈ ಸಂಬಂಧ ಸೈಬರ್ ಠಾಣೆಯಲ್ಲಿ ಎಫ್‌ಐಆರ್ ದಾಖಲಾಗಿತ್ತು. ಸದ್ಯ ಪ್ರಕರಣವನ್ನು ಸಿಸಿಬಿಗೆ ವರ್ಗಾವಣೆ ಮಾಡಲಾಗಿದ್ದು, ತನಿಖೆ ನಡೆಯುತ್ತಿದೆ.

## ಧರ್ಮಸ್ಥಳ ಪ್ರಕರಣ: ಗನ್ ಮ್ಯಾನ್ ಒದಗಿಸಿ ಎಂದು ದೂರುದಾರ ಮನವಿ

ಮಂಗಳೂರು: ನನಗೆ ಜೀವ ಬೆದರಿಕೆಯಿದ್ದು, ಗನ್ ಮ್ಯಾನ್ ಹಾಗೂ ಭದ್ರತೆ ಒದಗಿಸಿ ಎಂದು ಧರ್ಮಸ್ಥಳ ಸಾಮೂಹಿಕ ಅಂತ್ಯಕ್ರಿಯೆ ಪ್ರಕರಣದ ಸಾಕ್ಷಿ-ದೂರುದಾರ ವ್ಯಕ್ತಿ ಪ್ರಕರಣದ ತನಿಖೆ ನಡೆಸುತ್ತಿರುವ ವಿಶೇಷ ತನಿಖಾ ತಂಡ (ಎಸ್‌ಐಟಿ)ದ ಮುಂದೆ ಮನವಿ ಮಾಡಿದ್ದಾನೆಂದು ತಿಳಿದುಬಂದಿದೆ.

ಸಾಕ್ಷಿ ಹಾಗೂ ದೂರುದಾರ ವ್ಯಕ್ತಿ ವೈಯಕ್ತಿಕ ಭದ್ರತೆ/ಗನ್ ಮ್ಯಾನ್ ಒದಗಿಸುವಂತೆ ಮನವಿ ಮಾಡಿದ್ದು, ಈಗಾಗಲೇ ಅವರಿಗೆ ಭದ್ರತೆ ಒದಗಿಸಲಾಗಿದೆ.

ದಕ್ಷಿಣ ಕನ್ನಡ ಜಿಲ್ಲಾ ಪೊಲೀಸರು ರಕ್ಷಣೆ ಒದಗಿಸಿದ್ದಾರೆಂದು ಎಸ್‌ಐಟಿ ಮೂಲಗಳು ಮಾಹಿತಿ ನೀಡಿವೆ. ಸಾಕ್ಷಿ-ದೂರುದಾರರ ವ್ಯಕ್ತಿ ಮಾಜಿ ಪೌರ ಕಾರ್ಮಿಕನಾಗಿದ್ದು, ದಶಕದ ಹಿಂದೆ ಬೆಳ್ತಂಗಡಿ ತಾಲ್ಲೂಕಿನ ಧರ್ಮಸ್ಥಳ ಗ್ರಾಮದಲ್ಲಿ ಅತ್ಯಾಚಾರ ಮತ್ತು ಹತ್ಯೆಯಾದವರ ಶವಗಳನ್ನು ಅಂತ್ಯಕ್ರಿಯೆ ಮಾಡಿರುವುದಾಗಿ ದೂರಿನಲ್ಲಿ ತಿಳಿಸಿದ್ದಾರೆ.

ವ್ಯಕ್ತಿ ಅಂತ್ಯಕ್ರಿಯೆ ಮಾಡಿದ 13 ಸ್ಥಳಗಳನ್ನು ಗುರ್ತಿಸಿದ್ದು, 12 ಸ್ಥಳಗಳಲ್ಲಿ ಡಿಜಿಪಿ ಪ್ರಣಬ್ ಮೊಹಂತಿ ನೇತೃತ್ವದ ಎಸ್‌ಐಟಿ ಪರಿಶೀಲನೆ ಕಾರ್ಯವನ್ನು ಪೂರ್ಣಗೊಳಿಸಿದೆ. ಈ ಪೈಕಿ ಒಂದು ಸ್ಥಳದಲ್ಲಿ ಮಾತ್ರ ಅಸ್ತಿಪಂಜರ ಪತ್ತೆಯಾಗಿದೆ. ಕೊನೆಯ 13ನೇ ಸ್ಥಳದಲ್ಲಿ ಇನ್ನೂ ಕಾರ್ಯಾಚರಣೆ ಆರಂಭವಾಗಿಲ್ಲ.

ಏತನ್ಮಧ್ಯೆ ಪ್ರಕರಣದ ತನಿಖೆ ನಡೆಸುತ್ತಿರುವ ಎಸ್‌ಐಟಿಗೆ ಪೊಲೀಸ್ ಠಾಣೆ ಸ್ಥಾನಮಾನ ನೀಡಲಾಗಿದೆ ಎಂದು ತಿಳಿದಬಂದಿದೆ.

ಎಸ್‌ಐಟಿಗೆ ಪೊಲೀಸ್ ಠಾಣೆ ಸ್ಥಾನಮಾನ ನೀಡಿರುವ ಹಿನ್ನೆಲೆಯಲ್ಲಿ ಇದು ಎಫ್‌ಐಆರ್ ದಾಖಲಿಸಲು ಸಹಾಯ ಮಾಡಿದೆ ಎಂದು ಅಧಿಕಾರಿಯೊಬ್ಬರು ಹೇಳಿದ್ದಾರೆ.

Printed by: R Ramesh, Published by Abhishek D R On Behalf of Abhishek D R, Printed at Maruthi Enterprises. No.1159, Near Floor Mill, D Cross, Doddaballapura Town, Bengaluru rural, Karnataka - 561203, Published at No. 3769/1, Rajarathna Nivasa, KSRTC Layout, Near Ambedkar Stadium, Rayan Nagara, Nelamangala. Editor Abhishek D R.